## ಪದವಿ ಪೂರ್ವ ಉಪನ್ಯಾಸಕರ ನೇಮಕಾತಿ

**ಮೂಲ ದಾಖಲೆಗಳ ಪರಿಶೀಲನೆಗೆ ಹಾಜರಾಗುವ ಅಭ್ಯರ್ಥಿಗಳಿಗೆ ಮಾರ್ಗಸೂಚಿಗಳು.**

1. ಮೂಲ ದಾಖಲೆಗಳ ಪರಿಶೀಲನೆಗೆ ಹಾಜರಾಗುವ ಅಭ್ಯರ್ಥಿಗಳು, ಪ್ರಾಧಿಕಾರದಿಂದ ನಿಗದಿಪಡಿಸಿದ ದಿನಾಂಕದಂದೇ ಹಾಜರಾಗತಕ್ಕದ್ದು. ನಿಗದಿ ಪಡಿಸಿದ ದಿನಾಂಕದಂದು ಹಾಜರಾಗದ ಅಭ್ಯರ್ಥಿಗಳಿಗೆ ಇತರೆ ದಿನಾಂಕದಂದು ಮೂಲ ದಾಖಲೆಗಳ ಪರಿಶೀಲನೆಗೆ ಅವಕಾಶ ನೀಡಲಾಗುವುದಿಲ್ಲ.
2. ಅಭ್ಯರ್ಥಿಗಳು ಸಲ್ಲಿಸುವ ಎಲ್ಲಾ ಮೂಲ ದಾಖಲೆಗಳು ಅರ್ಜಿ ಸಲ್ಲಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಜಾರಿಯಾಗಿರತಕ್ಕದ್ದು.
3. ಅಭ್ಯರ್ಥಿಗಳು ಮೂಲ ದಾಖಲೆಗಳ ಪರಿಶೀಲನಾ ಸಮಯದಲ್ಲಿ ಕಡ್ಡಾಯವಾಗಿ ಮೂಲ ದಾಖಲೆಗಳನ್ನು ಹಾಜರು ಪಡಿಸತಕ್ಕದ್ದು.

ಅಭ್ಯರ್ಥಿಗಳು ಈ ಕೆಳಕಂಡ ಮೂಲ ದಾಖಲೆಗಳನ್ನು ಮತ್ತು ಮೂಲ ದಾಖಲೆಗಳ ಎರಡು ಜೆರಾಕ್ಸ್ ಪ್ರತಿಗಳನ್ನು ದಾಖಲೆಗಳ ಪರಿಶೀಲನಾ ಸಮಯದಲ್ಲಿ ಹಾಜರುಪಡಿಸತಕ್ಕದ್ದು.

a. ಇತ್ತೀಚಿನ ಎರಡು ಪಾಸ್‌ಪೋರ್ಟ್ ಸೈಜ್ ಭಾವ ಚಿತ್ರ.

b. ಸ್ಪರ್ಧಾತ್ಮಕ ಪರೀಕ್ಷೆಯ ಪ್ರವೇಶ ಪತ್ರ.

c. ಆನ್‌ಲೈನ್‌ನಲ್ಲಿ ಸಲ್ಲಿಸಿರುವ ಅಂತಿಮ ಅರ್ಜಿ ನಮೂನೆ.

d. ಜಾರಿಯಲ್ಲಿರುವ ಗುರುತಿನ ಚೀಟಿ.
PAN card / Voter ID /Passport/ Driving license/ Aadhaar card / Ration card , etc.

e. ಜನ್ಮ ದಿನಾಂಕ ಪರಿಶೀಲಿಸಲು ಎಸ್.ಎಸ್.ಎಲ್.ಸಿ ಅಂಕಪಟ್ಟಿ ಅಥವಾ ತತ್ಸಮಾನ ಪ್ರಮಾಣ ಪತ್ರ.

f. ಸ್ನಾತಕೋತ್ತರ ಪದವಿಯ ಎಲ್ಲಾ ವರ್ಷಗಳ/ ಸೆಮಿಸ್ಟರ್‌ಗಳ ಅಂಕ ಪಟ್ಟಿ ಮತ್ತು ಪದವಿ ಪ್ರಮಾಣ ಪತ್ರ / (Convocation certificate).

g. ಬಿ.ಎಡ್ ಪದವಿಯ ಎಲ್ಲಾ ವರ್ಷಳ/ ಸೆಮಿಸ್ಟರ್‌ಗಳ ಅಂಕ ಪಟ್ಟಿ ಮತ್ತು ಪದವಿ ಪ್ರಮಾಣ ಪತ್ರ / (Convocation certificate).

h. ಅಭ್ಯರ್ಥಿಗಳು ಆನ್‌ಲೈನ್ ಅರ್ಜಿಯಲ್ಲಿ ಈ ಕೆಳಕಂಡ ಮೀಸಲಾತಿಗಳನ್ನು ಕೋರಿದ್ದಲ್ಲಿ ಮಾತ್ರ ಈ ಕೆಳಕಂಡ ಮೂಲ ದಾಖಲೆಗಳನ್ನು ಒದಗಿಸತಕ್ಕದ್ದು. ಆನ್‌ಲೈನ್ ಅರ್ಜಿಯಲ್ಲಿ ಯಾವುದೇ ಮೀಸಲಾತಿ ಕೋರಿರದಿದ್ದಲ್ಲಿ, ಈ ಹಂತದಲ್ಲಿ ಯಾವುದೇ ಮೀಸಲಾತಿ ನೀಡಲು ಅವಕಾಶ ಇರುವುದಿಲ್ಲ.

i. ಅಭ್ಯರ್ಥಿಗಳು ಸರ್ಕಾರಿ ನೌಕರರಾಗಿ ವಯೋಮಿತಿ ಸಡಿಲಿಕೆ ಕೋರಿದ್ದಲ್ಲಿ, ಸಕ್ಷಮ ಪ್ರಾಧಿಕಾರವು ಜಾರಿ ಮಾಡಿದ ಸೇವಾ ಪ್ರಮಾಣ ಪತ್ರ.

j. ಅರ್ಜಿ ಸಲ್ಲಿಸಲು ಸಕ್ಷಮ ಪ್ರಾಧಿಕಾರವು ಜಾರಿ ಮಾಡಿದ ನಿರಾಕ್ಷೇಪಣಾ ಪತ್ರ.

k. ಜಾತಿ ಪ್ರಮಾಣ ಪತ್ರ / ಜಾತಿ ಮತ್ತು ಆದಾಯ ಪ್ರಮಾಣ ಪತ್ರಗಳು.

   1. ಪರಿಶಿಷ್ಟ ಜಾತಿ ಮತ್ತು ಪ.ಪಂಗಡ ಅಭ್ಯರ್ಥಿಗಳು Form-D ನಮೂನೆಯಲ್ಲಿ ಪ್ರಮಾಣ ಪತ್ರ ಸಲ್ಲಿಸತಕ್ಕದ್ದು.
   2. ಪ್ರವರ್ಗ–1 ರ ಅಭ್ಯರ್ಥಿಗಳು Form- E ನಮೂನೆಯಲ್ಲಿ ಪ್ರಮಾಣ ಪತ್ರ ಸಲ್ಲಿಸತಕ್ಕದ್ದು.
   3. 2ಎ, 2ಬಿ, 3ಎ ಮತ್ತು 3ಬಿ ಅಭ್ಯರ್ಥಿಗಳು Form- F ನಮೂನೆಯಲ್ಲಿ ಪ್ರಮಾಣ ಪತ್ರ ಸಲ್ಲಿಸತಕ್ಕದ್ದು.

l. ಪರಿಶಿಷ್ಟ ಜಾತಿ, ಪ.ಪಂಗಡ, ಪ್ರವರ್ಗ–1, 2ಎ, 2ಬಿ, 3ಎ ಮತ್ತು 3ಬಿ ಅಭ್ಯರ್ಥಿಗಳು ಗ್ರಾಮೀಣ ಮೀಸಲಾತಿ ಕೋರಿದ್ದಲ್ಲಿ, ಪರಿಶಿಷ್ಟ ಜಾತಿ, ಪ.ಪಂಗಡ, ಪ್ರವರ್ಗ–1, 2ಎ, 2ಬಿ, 3ಎ ಮತ್ತು 3ಬಿ ಪ್ರಮಾಣ ಪತ್ರಗಳೊಂದಿಗೆ 1 ನೇ ತರಗತಿಯಿಂದ 10ನೇ ತರಗತಿ ವರೆಗೆ ಗ್ರಾಮೀಣ ಪ್ರದೇಶದಲ್ಲಿ ವ್ಯಾಸಂಗ ಮಾಡಿರುವ ಬಗ್ಗೆ ನಮೂನೆ–2 ರಲ್ಲಿ ನೀಡಲಾದ ಪ್ರಮಾಣ ಪತ್ರಕ್ಕೆ ಸಂಬಂದಪಟ್ಟ ಮುಖ್ಯೋಪಾಧ್ಯಾಯರ ಸಹಿ ಮತ್ತು ಸಂಬಂದಿತ ಕ್ಷೇತ್ರ ಶಿಕ್ಷಣಾಧಿಕಾರಿಗಳು ಮೇಲು ರುಜು ಮಾಡಿರತಕ್ಕದ್ದು.

m. ಸಾಮಾನ್ಯ ವರ್ಗದ ಅಭ್ಯರ್ಥಿಗಳು ಗ್ರಾಮೀಣ ಮೀಸಲಾತಿ ಕೋರಿದ್ದಲ್ಲಿ, ಗ್ರಾಮೀಣ ಪ್ರಮಾಣ ಪತ್ರದ ಜೊತೆಗೆ ನಮೂನೆ–1 ರಲ್ಲಿ ಅವರು ಮೇಲುಸ್ತರಕ್ಕೆ ಸೇರಿಲ್ಲದಿರುವ ಬಗ್ಗೆ ಸಂಬಂಧಿಸಿದ ತಹಶೀಲ್ದಾರ್ ನೀಡಿರುವ ಪ್ರಮಾಣ ಪತ್ರವನ್ನು ಸಲ್ಲಿಸತಕ್ಕದ್ದು.

n. ಕನ್ನಡ ಮಾಧ್ಯಮ ಮೀಸಲಾತಿ ಕೋರಿರುವ ಅಭ್ಯರ್ಥಿಗಳು 1ನೇ ತರಗತಿ ಇಂದ 10 ನೇ ತರಗತಿ ವರೆಗೆ ಕನ್ನಡ ಮಾಧ್ಯಮದಲ್ಲಿ ವ್ಯಸಂಗ ಮಾಡಿರುವ ಬಗ್ಗೆ ಸಂಬಂಧ ಪಟ್ಟ ಶಾಲೆಯ ಮುಖ್ಯೋಪಾಧ್ಯಾಯರ ಸಹಿ ಮತ್ತು ಮೊಹರಿನೊಂದಿಗೆ ಜಾರಿ ಮಾಡಲಾದ ಪ್ರಮಾಣ ಪತ್ರಗಳನ್ನು ಸಲ್ಲಿಸತಕ್ಕದ್ದು.

o. ಅನುಚ್ಛೇಧ 371 (ಜೆ) ರಂತೆ ಹೈದರಬಾದ್– ಕರ್ನಾಟಕ ಮೀಸಲಾತಿ ಕೋರುವ ಅಭ್ಯರ್ಥಿಗಳು ಅನುಬಂಧ–ಎ ರಲ್ಲಿ ಸೂಚಿಸಿರುವ ನಮೂನೆಯಲ್ಲಿಯೆ ಅರ್ಹತಾ ಪ್ರಮಾಣ ಪತ್ರವನ್ನು ಸಕ್ಷಮ ಪ್ರಾಧಿಕಾರವಾದ ಸಂಬಂಧ ಪಟ್ಟ ಉಪವಿಭಾಗದ ಸಹಾಯಕ ಆಯುಕ್ತರಿಂದ ಮೊಹರಿನೊಂದಿಗೆ ಸಹಿ ಮಾಡಿ ಜಾರಿಮಾಡಲಾದ ಪ್ರಮಾಣ ಪತ್ರವನ್ನು ಸಲ್ಲಿಸತಕ್ಕದ್ದು.

p. ಅಂಗವಿಕಲ ಅಭ್ಯರ್ಥಿಗಳು ವಿವಿಧ ವೈಕಲ್ಯತೆಯ ಶೇ 40ಕ್ಕೆ ಕಡಿಮೆ ಇಲ್ಲದಿರುವ ಬಗ್ಗೆ ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ ಸಿಆಸುಇ 115 ಸೆನೆನಿ 2005ರಲ್ಲಿ ನಿಗದಿ ಪಡಿಸಿದ ನಮೂನೆಯಲ್ಲಿ ಅಂಕವಿಕಲತೆ ಬಗ್ಗೆ ಜಿಲ್ಲಾ ಮಟ್ಟದ ವೈದ್ಯಕೀಯ ಮಂಡಳಿಯಿಂದ ನೀಡಲಾದ ವೈದ್ಯಕೀಯ ಪ್ರಮಾಣ ಪತ್ರವನ್ನು ಸಲ್ಲಿಸತಕ್ಕದ್ದು.

q. ಮಾಜಿ ಸೈನಿಕ ಮೀಸಲಾತಿ ಕೋರಿರುವ ಅಭ್ಯರ್ಥಿಗಳು, ಭೂದಳ, ನೌಕಾದಳ ಮತ್ತು ವಾಯದಳದಲ್ಲಿ ಯಾವುದೇ ಶ್ರೇಣಿಯಲ್ಲಿ (ಯೋಧ ಅಥವಾ ಯೋಧರಲ್ಲದ ಹುದ್ದೆಗಳಲ್ಲಿ) ಸೇವೆ ಸಲ್ಲಿಸಿ ನಿವೃತ್ತಿ ಹೊಂದಿರುವ ಬಗ್ಗೆ ನೀಡಲಾದ Discharge certificate ನ್ನು ಅಥವಾ ಸೈನಿಕರು ಯುದ್ಧ ಕಾರ್ಯಚರಣೆಯಲ್ಲಿ ಮೃತ ಪಟ್ಟಿದ್ದಲ್ಲಿ ಅದರ ಬಗ್ಗೆ ಸಕ್ಷಮ ಪ್ರಾಧಿಕಾರವು ನೀಡುವ ಪ್ರಮಾಣ ಪತ್ರಗಳನ್ನು ಸಲ್ಲಿಸತಕ್ಕದ್ದು.

**<u>ಸೂಚನೆ:</u>**

1. ಅಭ್ಯರ್ಥಿಗಳು ಸಲ್ಲಿಸಿರುವ ಮಾಹಿತಿ / ದಾಖಲೆಗಳು, ಸುಳ್ಳು / ತಿದ್ದುಪಡಿ ಮಾಡಿದ/ Tampered / forged / fabricated ದಾಖಲೆಗಳಾಗಿದ್ದಲ್ಲಿ ಅಂತಹ ಅಭ್ಯರ್ಥಿಯ ಅಭ್ಯರ್ಥಿತ್ವವನ್ನು ರದ್ದುಗೊಳಿಸಲಾಗುವುದು ಹಾಗೂ ಅವರ ಆಯ್ಕೆಯನ್ನು ಯಾವುದೇ ಸಮಯದಲ್ಲಾದರೂ ರದ್ದುಪಡಿಸಲಾಗುವುದು ಮತ್ತು ಅವರ ವಿರುದ್ಧ ಕಾನೂನು ಕ್ರಮ ಜರುಗಿಸಲಾಗುವುದು.
2. ಮೂಲ ದಾಖಲೆಗಳ ಪರಿಶೀಲನೆಗೆ ಅಭ್ಯರ್ಥಿಯು ಖುದ್ದು ಹಾಜರಾಗತಕ್ಕದ್ದು.
   (ಒಂದು ವೇಳೆ ಅಭ್ಯರ್ಥಿಗೆ ಪ್ರಯಾಣ ಮಾಡಲು ವೈದ್ಯರ ಮೂಲಕ ನಿಷೇದಿಸಿದ್ದಲ್ಲಿ, ಸೂಕ್ತ ವೈದ್ಯಕೀಯ ಪ್ರಮಾಣ ಪತ್ರ, ಮತ್ತು ಅಭ್ಯರ್ಥಿಯ ಒಪ್ಪಿಗೆ ಪತ್ರದೊಂದಿಗೆ ಅಭ್ಯರ್ಥಿಯ ಹತ್ತಿರದ ಸಂಬಂಧಿಗಳು ಮೂಲ ದಾಖಲೆಗಳೊಂದಿಗೆ ಹಾಜರಾಗಬಹುದು.)

3. ಪ್ರಾಧಿಕಾರವು ನಿಗದಿಪಡಿಸಿದ ದಿನಾಂಕದಂದು ಅಭ್ಯರ್ಥಿಗಳು ಮೂಲ ದಾಖಲೆಗಳ ಪರಿಶೀಲನೆಗೆ ಹಾಜರಾಗದಿದ್ದಲ್ಲಿ, ಅಂತಹ ಅಭ್ಯರ್ಥಿಗಳಿಗೆ ಮತ್ತೊಮ್ಮೆ ಅವಕಾಶ ನೀಡಲಾಗುವುದಿಲ್ಲ.
4. ಅಭ್ಯರ್ಥಿಗಳು, ಮೂಲ ದಾಖಲೆಗಳ ಸಮಯದಲ್ಲಿ ಸಂಬಂಧಪಟ್ಟ ಪ್ರಮಾಣ ಪತ್ರಗಳನ್ನು ಹಾಜರುಪಡಿಸದಿದ್ದಲ್ಲಿ ಅಂತಹ ಅಭ್ಯರ್ಥಿಗಳನ್ನು ಆಯ್ಕೆಗೆ ಪರಿಗಣಿಸಲಾಗುವುದಿಲ್ಲ.
5. ಯಾವುದೇ ಕಾರಣಕ್ಕೂ ಅಭ್ಯರ್ಥಿಗಳಿಗೆ ಮೂಲ ದಾಖಲೆಗಳ ಪರಿಶೀಲನೆಗೆ ಮತ್ತೋಮ್ಮೆ ಕಾಲಾವಕಾಶ ನೀಡಲಾಗುವುದಿಲ್ಲ, ಹಾಗೂ ಪ್ರಮಾಣ ಪತ್ರಗಳನ್ನು ಸಲ್ಲಿಸಲೂ ಸಹ ಮತ್ತೊಮ್ಮೆ ಕಾಲವಕಾಶ ನೀಡಲಾಗುವುದಿಲ್ಲ.
6. ಅಭ್ಯರ್ಥಿಗಳಿಗೆ ಮೂಲ ದಾಖಲೆಗಳ ಪರಿಶೀಲನೆಗೆ ಹಾಜರಾಗಲು ಪ್ರತ್ತೇಕ ಮಾಹಿತಿ ನೀಡಲಾಗುವುದಿಲ್ಲ, ಅಭ್ಯರ್ಥಿಗಳು ಕಡ್ಡಾಯವಾಗಿ ಪ್ರಾಧಿಕಾರದ ಅಂತರ್ಜಾಲದಿಂದ ಮಾಹಿತಿ ಪಡೆಯತಕ್ಕದ್ದು.
7. ಮೂಲ ದಾಖಲೆಗಳ ಪರಿಶೀಲನೆಯನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಕಛೇರಿ, 18ನೇ ಕ್ರಾಸ್, ಸಂಪಿಗೆ ರಸ್ತೆ, ಮಲ್ಲೇಶ್ವರಮ್, ಬೆಂಗಳೂರು–560012 ರಲ್ಲಿ ನಡೆಸಲಾಗುವುದು.

ಸಹಿ/–
ಕಾರ್ಯನಿರ್ವಾಹಕ ನಿರ್ದೇಶಕರು
ಕರ್ನಾಟಕ ಪರೀಕ್ಷಾ ಪ್ರಾಧಿಕಾರ